ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,**

**ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ,**

**ಬೆಂಗಳೂರು-560 009**

ಸಂಖ್ಯೆ: ಸಿಎಸಿ-04/ಪಪ್ರಾಶಾಶಿನೇ/01/2017-18 ದಿನಾಂಕ: 10/10/2018

## ಪ್ರಕಟಣೆ

ಪದವೀಧರ ಪ್ರಾಥಮಿಕ ಶಾಲೆಗಳ ಶಿಕ್ಷಕರ (6-8ನೇ ತರಗತಿ ವೃಂದ) ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ 1:3 ಅನುಪಾತದ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 27/08/2018ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. ಹಾಗೆಯೇ ನಿಯಮಾನುಸಾರ ದಿನಾಂಕ:28/09/2018ರಂದು 1:2 ಅನುಪಾತದ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಿದೆ. ಪ್ರಸ್ತುತ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಬಿಡುಗಡೆಗೆ ಕೆಳಕಂಡ ವಿವರಗಳನ್ನು ಪರಿಗಣಿಸಿದೆ.

- 1:2 ತಾತ್ಕಾಲಿಕ ಅರ್ಹತಾ ಪಟ್ಟಿಗೆ ಪರಿಗಣಿಸಿದ್ದ ಅಭ್ಯರ್ಥಿಗಳಲ್ಲಿ ದಾಖಲೆಗಳ ಪರಿಶೀಲನೆಗೆ ಹಾಜರಾಗದ 411 ಜನ ಅಭ್ಯರ್ಥಿಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ.
- 1:2 ತಾತ್ಕಾಲಿಕ ಅರ್ಹತಾ ಪಟ್ಟಿಗೆ ಸಲ್ಲಿಸಲಾದ 66 ಅಭ್ಯರ್ಥಿಗಳ ಆಕ್ಷೇಪಣೆಗಳಲ್ಲಿನ ಸೂಕ್ತವಾದ ವಿವರಗಳನ್ನು ಪರಿಗಣಿಸಿ ದತ್ತಾಂಶದಲ್ಲಿ ಅಳವಡಿಸಿದೆ.

ಸದರಿ ವಿವರಗಳನ್ನು ಒಳಗೊಂಡಂತೆ 1:1 ಅನುಪಾತದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 10-10-2018 ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

ಸದರಿ 1:1 ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಕಚೇರಿ ಕಾರ್ಯನಿರ್ವಹಿಸುವ 05 ದಿನಗಳು ಅಂದರೆ ದಿನಾಂಕ: 11-10-2018, 12-10-2018, 13-10-2018, 15-10-2018 ಮತ್ತು 16-10-2018 ರವರೆಗೆ ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಕೇಂದ್ರೀಕೃತ ದಾಖಲಾತಿ ಘಟಕದ ಕಚೇರಿಗೆ ಸಲ್ಲಿಸಬಹುದಾಗಿದೆ. ಈ ಅವಧಿಯನ್ನು ಮೀರಿ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಸ್ವೀಕರಿಸುವುದಿಲ್ಲ.

ಆಯುಕ್ತರು,

ಸಾರ್ವಜನಿಕ ಶಿಕ್ಷಣ ಇಲಾಖೆ